ದಿನಾಂಕ: 05-06-2026 ರಂದು ಸಾಕ್ಷಿಯನ್ನು ಕರೆಯಿಸಲಾಯಿತು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಶ್ರೀ.ಪಿ.ಬಿ.ಕೆ.ಅರ್. ವಕೀಲರಿಂದ,**

ನಾನು ಈ ದಿನ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಅಂಶಗಳನ್ನು ನಾನೇ ಸ್ವತ: ಹೇಳಿ ಬರೆಯಿಸಿದ್ದು ಮತ್ತು ಅವು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದೇ ಇರುತ್ತವೆ.

1. ಒಂದು ಭೂ ಮಂಜೂರಾತಿ ಪತ್ರ ಹಾಜರುಪಡಿಸಿದ್ದು ಅದನ್ನು ನಿಪಿ 1 ಎಂದು ಗುರುತಿಸಲಾಯಿತು.
2. ದೃಡೀಕೃತ ನಕಲಿನ ಮುಟೇಶನ ಆದೇಶ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 2 ಎಂದು ಗುರುತಿಸಲಾಯಿತು.
3. ತಾಲ್ಲೂಕು ಕಚೇರಿ ಸಂಡೂರು ರವರು ನೀಡಿರುವ ದೃಡೀಕೃತ ನಕಲಿನ ಭೂ ಮಂಜೂರಾತಿ ಸಭೆಯಲ್ಲಿ ನಡೆದಿರುವ ನಡುವಳಿಯ ಪ್ರತಿಯನ್ನು (2 ಪುಟ) ಹಾಜರುಪಡಿಸಿದ್ದು ಅದನ್ನು ನಿಪಿ 3 ಎಂದು ಗುರುತಿಸಲಾಯಿತು.
4. 2023-24 ನೇ ಸಾಲಿನ ಸರ್ವೆ ನಂಃ258 ಗೆ ಸಂಬಂಧಿಸಿದ ಮೂರು ಪುಟಗಳ ಗಣಕೀಕೃತ ಪಹಣಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 4 ಎಂದು ಗುರುತಿಸಲಾಯಿತು.
5. ದಿಃ01.04.1990 ರಿಂದ 31.03.2004 ರವರೆಗಿನ ದೃಡೀಕೃತ ನಕಲಿನ ಋಣಭಾರ ರಹಿತ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ 5 ಎಂದು ಗುರುತಿಸಲಾಯಿತು.
6. ದಿಃ01.04.2004 ರಿಂದ 21.01.2023 ರವರೆಗಿನ ದೃಡೀಕೃತ ನಕಲಿನ ಋಣಭಾರ ರಹಿತ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ 6 ಎಂದು ಗುರುತಿಸಲಾಯಿತು.
7. ದೃಡೀಕೃತ ನಕಲಿನ ಪಟ್ಟಾ ಪುಸ್ತಕದ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 7 ಎಂದು ಗುರುತಿಸಲಾಯಿತು.
8. ನಾಲ್ಕು ಕರ ರಸೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ 8 ರಿಂದ 11 ಎಂದು ಗುರುತಿಸಲಾಯಿತು.
9. ದಿಃ07.11.2003 ರಂದು ಮುಖ್ಯಾಧಿಕಾರಿ ಪಟ್ಟಣ ಪಂಚಾಯತಿ ಸಂಡೂರು ರವರು ನೀಡಿರುವ ಸೂಚನೆ ನೋಟಿಸ್ ನ್ನು ಹಾಜರುಪಡಿಸಿದ್ದು ಅದನ್ನು ನಿಪಿ 12 ಎಂದು ಗುರುತಿಸಲಾಯಿತು.

10. 2002-03 ನೇ ಸಾಲಿನ ಸ್ವಯಂ ಆಸ್ತಿ ತೆರಿಗೆ ಘೋಷಣೆ ವಿವರ ಪಟ್ಟಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 13 ಎಂದು ಗುರುತಿಸಲಾಯಿತು.
11. ವಂಶವೃಕ್ಷ ದೃಡೀಕರಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ 14 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯವಿಚಾರಣೆಗೆ ವಾದಿಯ ಪರ ವಕೀಲರು ಕಾಲಾವಕಾಶ ಕೋರಿದ್ದು, ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೆ.ಸರಿ.ಇದೆ.

ಪ್ರ.ದ.ನ್ಯಾ.ದಂಡಾಧಿಕಾರಿಗಳು,
ಸಂಡೂರು.